ಸಮಾಜ ಕಲ್ಯಾಣ ಸಚಿವರು

ಅ) ಚಾಮರಾಜನಗರ ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕು ಆಗಿದ್ದು, ಈ ತಾಲ್ಲೂಕಿನ ಹರವೆ ಗ್ರಾಮಕ್ಕೆ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮಂಜೂರಾತಿಗಾಗಿ ಬೇಡಿಕೆ ಬಂದಿದೆಯೇ;

ಇಲ್ಲ.

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಉದ್ಭವಿಸುವುದಿಲ್ಲ.

ಸಂಖ್ಯೆ:ಸಕಇ 29 ಮೊದೇಶಾ 2009

(ಡಿ.ಸುಧಾಕರ್)
ಸಮಾಜ ಕಲ್ಯಾಣ ಸಚಿವರು

<u>ಕರ್ನಾಟಕ ವಿಧಾನ ಸಭೆ.</u>

90 ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ)
ಮಾನ್ಯ ಕಾರ್ಮಿಕ ಸಚಿವರು

ಅ) ಚಾಮರಾಜನಗರ ತಾಲ್ಲೂಕು ಹರವೆ ಗ್ರಾಮದಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರಕ್ಕೆ ಬೇಡಿಕೆ ಬಂದಿದೆಯೇ;

ಹೌದು.

Yes.

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಹರವೆ ಗ್ರಾಮದಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಯ ಅಗತ್ಯತೆ ಹಾಗೂ ಅನುದಾನದ ಲಭ್ಯತೆ ಆಧರಿಸಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಕಾಇ 06 ಇಟಿಎ 2009

(ಬಿ.ಎನ್.ಬಚ್ಚೇಗೌಡ)
ಮಾನ್ಯ ಕಾರ್ಮಿಕ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

111 ಶ್ರೀ. ಸುನೀಲ್ ವಿ. ಹೆಗಡೆ (ಹಲಿಯಾಳ್)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿರುವ ಆಸ್ಪತ್ರೆಗಳಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಬಂದಿದೆ.

ಆ) ಹಾಗಿದ್ದಲ್ಲಿ, ಅವಶ್ಯಕ ಸಿಬ್ಬಂದಿಯ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?(ವಿವರಗಳನಗನ್ನು ನೀಡುವುದು);

ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ನಿವೃತ್ತ ತಜ್ಞ ವೈದ್ಯರುಗಳನ್ನು ಸಂದರ್ಶಕ ತಜ್ಞ ವೈದ್ಯರುಗಳನ್ನಾಗಿ ನೇಮಿಸಿಕೊಳ್ಳಲು ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇಲಾಖೆಯಲ್ಲಿ ಸೇವಾನಿರತ ವೈದ್ಯರುಗಳು ಸ್ನಾತಕೋತ್ತರ ಪದವಿ ಪಡೆದು ಬಂದ ನಂತರ ತಜ್ಞ ವೈದ್ಯರುಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಸಹ ಕ್ರಮ ಕೈಗೊಳ್ಳಲಾಗುವುದು.

ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ 5021 ಅರೆವೈದ್ಯಕೀಯ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು, ನೇಮಕಾತಿ ನಿಯಮಗಳ ಕರಡು ಅಧಿಸೂಚನೆಯನ್ನು ಆಕ್ಷೇಪಣೆ/ಸಲಹೆ ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿ ದಿನಾಂಕ: 7–2–2009 ರಂದು ಹೊರಡಿಸಲಾಗಿದೆ. ಸದರಿ ನಿಯಮಗಳು ಅಂತಿಮಗೊಂಡ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. ಅಭ್ಯರ್ಥಿಗಳು ಲಭ್ಯವಾದ ನಂತರ ಖಾಲಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲಾಗುವುದು.

ಇ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿರುವ ಸಾರ್ವಜನಿಕ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಈಗಾಗಲೇ ರಾಜ್ಯದಲ್ಲಿನ ಅನೇಕ ಆಸ್ಪತ್ರೆ / ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೇಗೇರಿಸಲಾಗಿದ್ದು, ಸದರಿ ಮೇಲ್ದರ್ಜೇಗೇರಿಸಲಾದ ಆಸ್ಪತ್ರೆ / ಆರೋಗ್ಯ ಕೇಂದ್ರಗಳಿಗೆ ಒದಗಿಸಬೇಕಾಗಿರುವ ಮೂಲಭೂತ ಸೌಕರ್ಯ ಹಾಗೂ ಸಿಬ್ಬಂದಿಯನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸಾಧ್ಯವಾಗಿರುವುದಿಲ್ಲ. ಈಗಾಗಲೇ ಮೇಲ್ದರ್ಜೇಗೇರಿಸಿರುವ ಅಂತಹ ಕೇಂದ್ರಗಳಿಗೆ ಸೌಲಭ್ಯ ಒದಗಿಸಿ ಬಲಪಡಿಸಬೇಕಾಗಿದೆ. ಆದುದರಿಂದ ಸಧ್ಯದಲ್ಲಿ ಆಸ್ಪತ್ರೆ / ಆರೋಗ್ಯ ಕೇಂದ್ರಗಳನ್ನು ಮೇಲ್ಧರ್ಜೇಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಈ) ಹಾಗಿದ್ದಲ್ಲಿ, ಮೇಲ್ದರ್ಜೇಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರಗಳನ್ನು ನೀಡುವುದು):

ಉದ್ಭವಿಸುವುದಿಲ್ಲ.

ಊ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆಂಬ್ಯುಲೆನ್ಸ್ ಹಾಗೂ ತಾಂತ್ರಿಕ ಸಲಕರಣೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕಿನ ಆಸ್ಪತ್ರೆಗೆ ಒಂದೊಂದು ಸುಸ್ಥಿತಿಯಲ್ಲಿಯಿರುವ ಆಂಬ್ಯುಲನ್ಸ್ ಹಾಗೂ ತಾಂತ್ರಿಕ ಸಲಕರಣೆಗಳನ್ನು ನೀಡಲಾಗಿದೆ.

ಋ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರಗಳನ್ನು ನೀಡುವುದು):

ಉದ್ಭವಿಸುವುದಿಲ್ಲ.

ಋ) ಜೋಯಿಡಾ ತಾಲ್ಲೂಕಿಗೆ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಪ್ರಾಥಮಿಕ ಕೇಂದ್ರ ಅಥವಾ ಆರೋಗ್ಯ ಕವಚದಂತಹ ಸಂಚಾರಿ ಆಸ್ಪತ್ರೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಜೋಯಿಡಾ ತಾಲ್ಲೂಕಿಗೆ ಈಗಾಗಲೇ ಸಂಚಾರಿ ಘಟಕವನ್ನು ಮಂಜೂರು ಮಾಡಿ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಹಾಗೂ ವಾಹನ ಒದಗಿಸಲಾಗಿದೆ.

ಎ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು? (ವಿವರಗಳನ್ನು ನೀಡುವುದು):

ಉದ್ಭವಿಸುವುದಿಲ್ಲ.

ಸಂಖ್ಯೆ: ಆಕುಕ 57 ಹಚ್‌ಎಸ್‌ಎಂ 2009

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

112 ಶ್ರೀ. ಸುನೀಲ್ ಎ ಹೆಗಡೆ (ಹಳಿಯಾಳ)
ಶ್ರೀ.ಡಿ.ಸುಧಾಕರ, ಮಾನ್ಯ ಸಮಾಜ ಕಲ್ಯಾಣ ಸಚಿವರು.